**JANUARY 22, 2025**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

- **ಸಂವಿಧಾನ ಆಶಯಗಳ** ರಕ್ಷಣೆಯಿಂದ ಮಾತ್ರ ನಮ್ಮನ್ನು ನಾವು ರಕ್ಷಿಸಿಕೊಳ್ಳಲು ಸಾಧ್ಯ–ಮುಖ್ಯಮಂತ್ರಿ ಸಿದ್ದರಾಮಯ್ಯ.
- **ಮೌಲ್ಯಯುತ ರಾಷ್ಟ್ರ** ನಿರ್ಮಾಣ ಗಾಂಧೀಜಿ ಅವರ ಕನಸಾಗಿತ್ತು– ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ.
- **ಕರ್ನಾಟಕದ ತೆಂಗು ಮತ್ತು ಅಡಿಕೆ ಬೆಳೆಗಾರರ** ಸಮಸ್ಯೆಗಳ ಕುರಿತು ಕೇಂದ್ರ ಕೃಷಿ ಸಚಿವರೊಂದಿಗೆ ಸಮಾಲೋಚನೆ.
- **ಈ ಬಾರಿಯ ಗಣರಾಜ್ಯೋತ್ಸವ** ಪರೇಡ್‌ಗೆ ಗದಗ ಜಿಲ್ಲೆ ಲಕ್ಕುಂಡಿಯ ಐತಿಹಾಸಿಕ ಪ್ರಸಿದ್ಧ ಬ್ರಹ್ಮ ಜಿನಾಲಯದ ಸ್ತಬ್ಧಚಿತ್ರ ಆಯ್ಕೆ.

**ಈಗ ವಾರ್ತೆಗಳ ವಿವರ**
***********

**ಸಂವಿಧಾನ ಆಶಯಗಳ** ರಕ್ಷಣೆಯಿಂದ ಮಾತ್ರ ನಮ್ಮನ್ನು ನಾವು ರಕ್ಷಿಸಿಕೊಳ್ಳಲು ಸಾಧ್ಯವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಬೆಳಗಾವಿ ಸುವರ್ಣ ಸೌಧದ ಆವರಣದಲ್ಲಿ ಹಮ್ಮಿಕೊಂಡಿದ್ದ ಗಾಂಧೀ ಭಾರತ ಕಾರ್ಯಕ್ರಮದಲ್ಲಿ ಮಹಾತ್ಮಾ ಗಾಂಧೀಜಿಯವರ ಪುತ್ಥಳಿ ಅನಾವರಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಭಾರತೀಯ ಪರಂಪರೆಯಲ್ಲಿ ಸಾಧು ಸಂತರು, ಸಮಾಜ ಸುಧಾರಕರು, ದಾರ್ಶನಿಕರು ಜಾತಿ ವ್ಯವಸ್ಥೆಯನ್ನು ಖಂಡಿಸುತ್ತ ಬಂದಿದ್ದಾರೆ. ಈ ಪರಂಪರೆಯ ಆಶಯಗಳನ್ನು ಸಂವಿಧಾನದಲ್ಲಿ ಅಳವಡಿಸಿಕೊಳ್ಳಲಾಗಿದೆ. ಅವುಗಳನ್ನು ಅರ್ಥ ಮಾಡಿಕೊಂಡು ಉತ್ತಮ ಸಮ ಸಮಾಜ ನಿರ್ಮಿಸಬೇಕಿದೆ ಎಂದರು. ಮಹಾತ್ಮ ಗಾಂಧೀಜಿಯವರು ಅಹಿಂಸೆ, ಸತ್ಯ, ಸಮಾನತೆ, ಗ್ರಾಮೀಣ ಅಭಿವೃದ್ಧಿ ಹಾಗೂ ಮಹಿಳೆಯರ ಸಬಲೀಕರಣಕ್ಕೆ ವಿಶೇಷ ಆದ್ಯತೆ ನೀಡಿದ್ದರು. ಅವರು ಧರ್ಮ ಸಂಕುಚಿತತೆ ಹೊಂದಿರಲಿಲ್ಲ. ಅವರೊಬ್ಬ ಅಪ್ಪಟ ಸುಧಾರಣಾವಾದಿಯಾಗಿದ್ದರು. ಅವರ ತತ್ವ ಸಿದ್ಧಾಂತಗಳನ್ನು ನಾಡಿನಾದ್ಯಂತ ಪಸರಿಸುವ ನಿಟ್ಟಿನಲ್ಲಿ ಗಾಂಧಿ ಭಾರತ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

***********

**ಅಸ್ಪೃಶ್ಯತೆ ನಿವಾರಣೆ** ಜೊತೆ ಮೌಲ್ಯಯುತ ರಾಷ್ಟ್ರ ನಿರ್ಮಾಣ ಗಾಂಧೀಜಿ ಅವರ ಕನಸಾಗಿತ್ತು ಎಂದು ರಾಜ್ಯಸಭೆ ವಿರೋಧ ಪಕ್ಷದ ನಾಯಕ ಹಾಗೂ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ. ಬೆಳಗಾವಿ ಸುವರ್ಣ ಸೌಧದ ಆವರಣದಲ್ಲಿ ಹಮ್ಮಿಕೊಂಡಿದ್ದ ಗಾಂಧೀ ಭಾರತ ಕಾರ್ಯಕ್ರಮದಲ್ಲಿ ಮಹಾತ್ಮಾ ಗಾಂಧೀಜಿಯವರ ಪುತ್ಥಳಿ ಅನಾವರಣಗೊಳಿಸಿ ಮಾತನಾಡಿದ ಅವರು, ಸಾಂವಿಧಾನಿಕ ಪ್ರಜಾತಂತ್ರ ದೇಶದಲ್ಲಿ ಜಾರಿಗೊಳ್ಳದೇ ಹೋಗಿದ್ದರೆ ಅರಾಜಕತೆ ಉಂಟಾಗುತ್ತಿತ್ತು. ಸ್ವಾತಂತ್ರ್ಯ ಸಂಗ್ರಾಮಕ್ಕೆ ಹೋರಾಡಿದ ಗಾಂಧೀಜಿಯವರು ಅಂದು ಕಟ್ಟಿಕೊಟ್ಟ ಮೌಲ್ಯಗಳು ಇಂದು ಹೆಚ್ಚು ಪ್ರಸ್ತುತತೆ ಪಡೆದುಕೊಂಡಿವೆ. ಗಾಂಧೀಜಿವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ ಕಾಂಗ್ರೆಸ್ ಅಧಿವೇಶನ ನಡೆದದ್ದು ಅವಿಸ್ಮರಣೀಯ ಘಟನೆ ಎಂದು ಅವರು ಹೇಳಿದರು.

**ಧ್ವನಿ–ಮಲ್ಲಿಕಾರ್ಜುನ ಖರ್ಗೆ–35 ಸೆಕೆಂಡ್ಸ್**

*******

**ಗದಗ ಜಿಲ್ಲೆಯ ಪ್ರತಿ** ಗ್ರಾಮದ ಚರಿತ್ರೆ ರಚಿಸಿ, ಸಂಪುಟ ರೂಪದಲ್ಲಿ ಸಲ್ಲಿಸಲು ಜಿಲ್ಲಾಧಿಕಾರಿ ನೇತೃತ್ವದ ಸಮಿತಿ ರಚಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಹೇಳಿದ್ದಾರೆ. ಗದಗ ಜಿಲ್ಲೆ ಗಜೇಂದ್ರಗಡದಲ್ಲಿ ಆಯೋಜಿಸಿರುವ ಎರಡು ದಿನಗಳ 10ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮುಂದಿನ ಮಾರ್ಚ್ ವೇಳೆಗೆ ಸಮಿತಿ ವರದಿ ಸಲ್ಲಿಕೆಯಾಗುವ ಸಾಧ್ಯತೆಯಿದೆ ಎಂದರು. ಗದಗ, ಶ್ರೀಮಂತ ಸಾಂಸ್ಕೃತಿಕ ಸಂಪತ್ತು ಹೊಂದಿರುವ ಜಿಲ್ಲೆ. ರಾಷ್ಟ್ರ ಮಟ್ಟದ ಸಂಗೀತಗಾರರು, ಕಲಾವಿದರು, ಕವಿಗಳು, ಬರಹಗಾರರು, ವಿದ್ವಾಂಸರು, ಮಠಗಳು ಹಾಗೂ ಸಂಪದ್ಭರಿತ ಸಂಸ್ಕೃತಿಯನ್ನು ಹೊಂದಿರುವ ಜಿಲ್ಲೆ. ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಜಿಲ್ಲೆಯ ಹೆಸರು ಬೆಳಗಲು ಇವರೆಲ್ಲರ ಕೊಡುಗೆ ಅಪಾರವಾಗಿದೆ ಎಂದು ಸಚಿವರು ಅಭಿಪ್ರಾಯಪಟ್ಟರು.

*******

**ಕರ್ನಾಟಕದ ತೆಂಗು ಮತ್ತು ಅಡಿಕೆ ಬೆಳೆಗಾರರು** ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಸಂಬಂಧ, ಕೇಂದ್ರ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ದೆಹಲಿಯಲ್ಲಿ ನಿನ್ನೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರೊಂದಿಗೆ ಸಮಾಲೋಚನೆ ನಡೆಸಿದರು. ಈ ವೇಳೆ, ಸಚಿವರು ಕರ್ನಾಟಕ ಸೇರಿದಂತೆ ದೇಶದ ಕೃಷಿ ಕ್ಷೇತ್ರದ ಆಗುಹೋಗುಗಳು, ರೈತರ ಕುಂದುಕೊರತೆಗಳು ಸೇರಿದಂತೆ ವಿವಿಧ ವಿ ೈಯಗಳ ಕುರಿತು ಚರ್ಚೆ ನಡೆಸಿದರು. ಅಡಿಕೆಗೆ ಬರುವ ರೋಗಗಳ ಪರಿಹಾರಕ್ಕಾಗಿ 67 ಕೋಟಿ ರೂಪಾಯಿಗಳನ್ನು ಮುಂದಿನ ಬಜೆಟ್‌ನಲ್ಲಿ ಘೋ ೈಣೆ ಮಾಡಲಾಗುವುದು ಎಂದು ಈ ಸಂದರ್ಭದಲ್ಲಿ ಶಿವರಾಜ್ ಸಿಂಗ್ ಚೌಹಾಣ್ ಭರವಸೆ ನೀಡಿದರು.

*******

**100 ಕೋಟಿ ರೂಪಾಯಿಗಳ** ವೆಚ್ಚದಲ್ಲಿ ತುಮಕೂರು ರೈಲು ನಿಲ್ದಾಣವನ್ನು ನವೀಕರಣಗೊಳಿಸಿ, ನಿಲ್ದಾಣಕ್ಕೆ ಶ್ರೀ ಶಿವಕುಮಾರ ಸ್ವಾಮೀಜಿ ಅವರ ಹೆಸರನ್ನು ಇಡಲಾಗುವುದು ಎಂದು ಕೇಂದ್ರ ರೈಲ್ವೇ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದ್ದಾರೆ. ಸಿದ್ಧಗಂಗಾ

ಮಠದಲ್ಲಿ ನಡೆದ ಡಾ.ಶ್ರೀ ಶಿವಕುಮಾರಸ್ವಾಮೀಜಿ ಅವರ ಪುಣ್ಯಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ರಾಯದುರ್ಗ–ತುಮಕೂರು, ತುಮಕೂರು–ದಾವಣಗೆರೆ ಸುಮಾರು 400 ಕಿ.ಮೀ.ಕ್ಕೂ ಹೆಚ್ಚು ದೂರದ ರೈಲು ಮಾರ್ಗದ ನಿರ್ಮಾಣ ಕಾಮಗಾರಿಗಳು ಭರದಿಂದ ಸಾಗಿವೆ. ಮುಂದಿನ 2 ವ ರ್ಷದೊಳಗೆ ಜಿಲ್ಲೆಯ 23 ಕಡೆ ರೈಲ್ವೆ ಮೇಲ್ಸೇತುವೆಯನ್ನು ಅಭಿವೃದ್ಧಿಪಡಿಸುವ ಸಂಕಲ್ಪ ಮಾಡಲಾಗಿದೆ ಎಂದರು.

*******

**ಭಾರತೀಯ ಸಂಸ್ಕೃತಿ ವಿಶ್ವ** ಸಹೋದರತ್ವ, ವಿಶ್ವಶಾಂತಿ, ಸಾಮರಸ್ಯವನ್ನು ಪ್ರೇರಿಸುತ್ತದೆ ಎಂದು ರಾಜ್ಯಪಾಲ ಥಾವರಚಂದ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ತ್ರಿವಿಧ ದಾಸೋಹಿ, ಕರ್ನಾಟಕ ರತ್ನ, ಪದ್ಮಭೂ ಷಣ ಡಾಕ್ಟರ್ ಶಿವಕುಮಾರ್ ಮಹಾ ಶಿವಯೋಗಿಗಳ 6ನೇ ವ ರ್ಷದ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಭಾರತೀಯ ಸಂಸ್ಕೃತಿ ಅನಂತವಾದದ್ದು. ಸಂತರು ಅನಾದಿ ಕಾಲದಿಂದಲೂ ನಿರಂತರವಾಗಿ ರಕ್ಷಿಸುತ್ತಿದ್ದಾರೆ. ಧರ್ಮದ ಏಕತೆ, ಸಮಗ್ರತೆಗೆ ಮತ್ತು ಸನಾತನ ಧರ್ಮ ಪರಂಪರೆಯನ್ನು ಶ್ರೀಮಂತಗೊಳಿಸಲು ಸಾಧು–ಸಂತರ ಕೊಡುಗೆ ಅಪಾರ ಎಂದರು. ಡಾಕ್ಟರ್ ಶಿವಕುಮಾರ ಮಹಾ ಶಿವಯೋಗಿಗಳ ಜೀವನ ಪಯಣ ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕ. ಮಾನವೀಯತೆ, ಜಾತಿ, ಧರ್ಮ ಮತ್ತು ಬೌದ್ಧಿಕತೆಯನ್ನು ಮೀರಿದ್ದಾಗಿದೆ. ಸ್ವಾಮೀಜಿಗಳ ಸರಳ ಮತ್ತು ಉನ್ನತ ಜೀವನ ತತ್ವವನ್ನು ಇತರರು ಕೂಡ ಅದೇ ಮಾರ್ಗದಲ್ಲಿ ಅನುಸರಿಸಲು ಪ್ರೇರಣೆ ನೀಡಿದೆ ಎಂದು ರಾಜ್ಯಪಾಲರು ಹೇಳಿದರು.

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಇದೇ ಜನೇವರಿ 26** ರಂದು ನವದೆಹಲಿಯಲ್ಲಿ ಜರುಗುವ ಗಣರಾಜ್ಯೋತ್ಸವ ಪರೇಡ್‌ಗೆ ಗದಗ ಜಿಲ್ಲೆ ಲಕ್ಕುಂಡಿಯ ಐತಿಹಾಸಿಕ ಪ್ರಸಿದ್ಧ ಬ್ರಹ್ಮ ಜಿನಾಲಯದ ಸ್ತಬ್ಧಚಿತ್ರ ಆಯ್ಕೆಯಾಗಿದೆ. ನವ ದೆಹಲಿಯ ಕರ್ತವ್ಯ ಪಥದಲ್ಲಿ ನಡೆಯುವ ಪರೇಡನಲ್ಲಿ ಪಾಲ್ಗೊಳ್ಳಲು ಬ್ರಹ್ಮ ಜಿನಾಲಯ ದೇವಾಲಯ ಸ್ಥಬ್ಧ ಚಿತ್ರ ಆಯ್ಕೆ ಆಗಿದ್ದು, ಗದಗ ಜಿಲ್ಲೆಯ ಲಕ್ಕುಂಡಿಯ ಶಿಲ್ಪಕಲಾ ವೈಭವವನ್ನು ಮತ್ತೆ ನೆನಪಿಸಲಿದೆ. ಸ್ಥಬ್ಧ ಚಿತ್ರದ ಮಹತ್ವ ತಯಾರಿಕೆ ಕುರಿತು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ ಅವರು ಆಕಾಶವಾಣಿಗೆ ನೀಡಿದ ಮಾಹಿತಿ

*******

**ಬೆಂಬಲ ಬೆಲೆ ಯೋಜನೆಯಡಿ,** ಕಲಬುರಗಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ತೊಗರಿ ಖರೀದಿ ಆರಂಭವಾಗಿದ್ದು, ಜಿಲ್ಲೆಯಾದ್ಯಂತ 177 ಖರೀದಿ ಕೇಂದ್ರಗಳನ್ನು ಗುರುತಿಸಲಾಗಿದೆ ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.ಪ್ರಸಕ್ತ ಸಾಲಿನಲ್ಲಿ, ಬೆಂಬಲ ಬೆಲೆ ಯೋಜನೆಯಡಿ ರಾಜ್ಯಾದ್ಯಂತ ಎಫ್.ಎ.ಕ್ಯೂ. ಗುಣಮಟ್ಟದ 3,06,150 ಮೆಟ್ರಿಕ್ ಟನ್ ತೊಗರಿ ಖರೀದಿಗೆ ಸರ್ಕಾರ ಆದೇಶಿಸಿದೆ. ಜಿಲ್ಲೆಯಲ್ಲಿ ಈಗಾಗಲೆ ಗುರುತಿಸಿರುವ 177 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಅಥವಾ ರೈತ ಉತ್ಪಾದಕ ಸಂಘಗಳಲ್ಲಿ

ತೊಗರಿ ಖರೀದಿಗೆ ನೊಂದಣಿ ಪ್ರಕ್ರಿಯೆ ಆರಂಭವಾಗಿದ್ದು, ಖರೀದಿಗೆ 134 ಕೇಂದ್ರ ಮ್ಯಾಪಿಂಗ್ ಆಗಿದ್ದು, ಇನ್ನುಳಿದ 43 ಕೇಂದ್ರ ತುರ್ತಾಗಿ ಮ್ಯಾಪಿಂಗ್ ಮಾಡಲಾಗುತ್ತದೆ ಎಂದು ತಿಳಿಸಿದ್ದಾರೆ.

*******

**ಹೆಚ್ಚು ಪ್ರೋಟೀನ್ ಮತ್ತು** ಫೈಬರ್ ಅಂಶ ಹೊಂದಿರುವ ಸಿರಿಧಾನ್ಯ ಬಳಕೆ ಆರೋಗ್ಯಕ್ಕೆ ಸಹಕಾರಿ ಎಂದು ಬಳ್ಳಾರಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರ ಹೇಳಿದ್ದಾರೆ. ಬಳ್ಳಾರಿಯಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಸಿರಿಧಾನ್ಯ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಸಿರಿಧಾನ್ಯಗಳನ್ನು ಬೆಳೆಯಲು ಸರ್ಕಾರ ಸಹ ಸಹಾಯಧನ ನೀಡುತ್ತಿದೆ. ಇದರ ಪ್ರಯೋಜನ ಪಡೆದು, ರೈತರು ಸಿರಿಧಾನ್ಯ ಕ್ಷೇತ್ರ ಹೆಚ್ಚಳ ಮಾಡುವುದರ ಜತೆ ಆರ್ಥಿಕ ಸ್ವಾವಲಂಬನೆ ಸಾಧಿಸಬೇಕು ಎಂದರು. ರಾಸಾಯನಿಕಯುಕ್ತ ಆಹಾರ ಧಾನ್ಯಗಳ ಬಳಕೆಯಿಂದ ಆರೋಗ್ಯದ ಮೇಲೆ ಹಲವು ದುಷ್ಪರಿಣಾಮಗಳು ಉಂಟಾಗುವುದನ್ನು ನಾವು ಅರಿತಿದ್ದೇವೆ. ಸಿರಿಧಾನ್ಯ ಮತ್ತು ಸಾವಯುವ ಧಾನ್ಯಗಳ ಬಳಕೆಯಿಂದ ನಮ್ಮ ಹಿರಿಯರು ಉತ್ತಮ ಆರೋಗ್ಯ ಕಾಪಾಡಿಕೊಂಡಿದ್ದರು ಎಂದು ಅವರು ಹೇಳಿದರು.

*******

**ಕಾರವಾರ ಜಿಲ್ಲೆ** ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಕುಡಿಯುವ ನೀರಿನ ಅನುಮೋದಿತ ಕ್ರಿಯಾ ಯೋಜನೆಯ ಕಾಮಗಾರಿಗಳನ್ನು ಶೀಘ್ರದಲ್ಲಿ ಪೂರ್ಣಗೊಳಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಕಾರವಾರದಲ್ಲಿ ನಡೆದ ನಗರ ಸ್ಥಳೀಯ ಸಂಸ್ಥೆಗಳ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅನುಮೋದಿತ ಕ್ರಿಯಾ ಯೋಜನೆಗಳ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ವಿಳಂಬ ಮಾಡಲಾಗುತ್ತಿದೆ. ಅನುಮೋದನೆ ನೀಡಿದ ನಂತರವೂ ವಿಳಂಬ ಧೋರಣೆ ತೋರುವ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

*******

**ಈಗ ಸಂಕ್ಷಿಪ್ತ ಸುದ್ದಿಗಳು**

**ಕೋಲಾರ ಜಿಲ್ಲೆಯ** ವೇಮಗಲ್–ಕುರುಗಲ್ ಪಟ್ಟಣ ಪಂಚಾಯಿತಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಏಕ್ ರೂಪ್ ಕೌರ್ ನಿನ್ನೆ ದಿಢೀರ್ ಭೇಟಿ ನೀಡಿ ಕಾಮಗಾರಿಗಳ ಪರಿಶೀಲನೆ ನಡೆಸಿದರು.

**ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ** ಶಿವಮೊಗ್ಗ ಜಿಲ್ಲಾ ಪಂಚಾಯಿತಿ, ಇದೇ 24 ರಿಂದ 26 ರವರೆಗೆ ನಗರದ ಫ್ರೀಡಂ ಪಾರ್ಕ್ ಆವರಣದಲ್ಲಿ ಫಲಪು ್ಪ ಪ್ರದರ್ಶನ ಹಮ್ಮಿಕೊಂಡಿದೆ.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ಸಂವಿಧಾನ ಆಶಯಗಳ** ರಕ್ಷಣೆಯಿಂದ ಮಾತ್ರ ನಮ್ಮನ್ನು ನಾವು ರಕ್ಷಿಸಿಕೊಳ್ಳಲು ಸಾಧ್ಯ–ಮುಖ್ಯಮಂತ್ರಿ ಸಿದ್ದರಾಮಯ್ಯ.

**ಮೌಲ್ಯಯುತ ರಾಷ್ಟ್ರ** ನಿರ್ಮಾಣ ಗಾಂಧೀಜಿ ಅವರ ಕನಸಾಗಿತ್ತು– ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ.

**ಕರ್ನಾಟಕದ ತೆಂಗು ಮತ್ತು ಅಡಿಕೆ ಬೆಳೆಗಾರರ** ಸಮಸ್ಯೆಗಳ ಕುರಿತು ಕೇಂದ್ರ ಕೃಷಿ ಸಚಿವರೊಂದಿಗೆ ಸಮಾಲೋಚನೆ.

**ಈ ಬಾರಿಯ ಗಣರಾಜ್ಯೋತ್ಸವ** ಪರೇಡ್‌ಗೆ ಗದಗ ಜಿಲ್ಲೆ ಲಕ್ಕುಂಡಿಯ ಐತಿಹಾಸಿಕ ಪ್ರಸಿದ್ಧ ಬ್ರಹ್ಮ ಜಿನಾಲಯದ ಸ್ತಬ್ಧಚಿತ್ರ ಆಯ್ಕೆ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

****END****